# ಹಗ್ಗಾಯ

### ಆಲಯವನ್ನು ಕಟ್ಟಲು ಇದೇ ಸಮಯ

1 ಪರ್ಶಿಯಾದ ರಾಜನಾದ ದಾರ್ಯಾವೇಷನ
ಆಳ್ವಿಕೆಯ ಎರಡನೇ ವರ್ಷದ, ಆರನೇ ತಿಂಗಳಿನ
ಮೊದಲನೇ ದಿವಸದಲ್ಲಿ ಹಗ್ಗಾಯನಿಗೆ ಯೆಹೋವನಿಂದ
ಸಂದೇಶವು ಬಂದಿತು. ಈ ಸಂದೇಶವು ಶೆಯಲ್ತೀಯೇ
ಲನ ಮಗನಾದ ಜೆರುಬ್ಬಾಬೆಲನಿಗೋಸ್ಕರ, ಯೆಹೋ
ಚಾದಾಕನ ಮಗನಾದ ಯೆಹೋಶುವನಿಗೋಸ್ಕರ
ಬಂದಿತು. ಜೆರುಬ್ಬಾಬೆಲನು ಯೆಹೂದ ಪ್ರಾಂತ್ಯದ ರಾಜ್ಯ
ಪಾಲನಾಗಿದ್ದನು; ಯೆಹೋಶುವನು ಪ್ರಧಾನ ಯಾಜಕ
ನಾಗಿದ್ದನು. ಸಂದೇಶವು ಇದೇ:
2ಸರ್ವಶಕ್ತನಾದ ಯೆಹೋವನು ಹೇಳುವುದೇನೆಂದರೆ,
‘‘ಆಲಯವನ್ನು ಕಟ್ಟಲು ಇದು ಸರಿಯಾದ ಸಮಯವಲ್ಲ
ವೆಂದು ಜನರು ಹೇಳುತ್ತಿದ್ದಾರೆ.’’
3ಹಗ್ಗಾಯನಿಗೆ ಮತ್ತೆ ಯೆಹೋವನಿಂದ ಸಂದೇಶವು
ಬಂದಿತು. ಹಗ್ಗಾಯನು ಈ ಸಂದೇಶವನ್ನು ತಿಳಿಸಿದನು:
4‘‘ಜನರೇ, ನೀವು ಅಂದವಾದ ಮನೆಗಳಲ್ಲಿ ವಾಸ
ಮಾಡಲು ಇದು ತಕ್ಕ ಸಮಯವೆಂದು ಹೇಳುತ್ತೀರಿ. ನಿಮ್ಮ
ಮನೆಗಳಲ್ಲಿ ಗೋಡೆಗೆ ಮರದ ಹಲಗೆಗಳನ್ನು ಹೊಡೆದಿ
ದ್ದೀರಿ. ಆದರೆ ಯೆಹೋವನ ಮನೆಯು ಇನ್ನೂ ಹಾಳು
ಬಿದ್ದಿದೆ. 5ಸರ್ವಶಕ್ತನಾದ ಯೆಹೋವನು ಹೇಳುವುದೇ
ನೆಂದರೆ, ‘ಏನು ನಡೆಯುತ್ತಿದೆಂಬುದರ ಬಗ್ಗೆ
ಯೋಚಿಸಿರಿ. 6ನೀವು ಬಹಳ ಬೀಜವನ್ನು ಭೂಮಿಯಲ್ಲಿ
ಬಿತ್ತಿದ್ದರೂ ಸ್ವಲ್ಪವೇ ಪೈರನ್ನು ಕೊಯ್ದಿದ್ದೀರಿ. ನಿಮಗೆ
ಊಟಮಾಡಲು ಆಹಾರವಿದ್ದರೂ ತೃಪ್ತಿಯಾಗುವಷ್ಟಿಲ್ಲ.
ನಿಮ್ಮಲ್ಲಿ ಕುಡಿಯಲು ಸ್ವಲ್ಪ ಪಾನೀಯವಿದ್ದರೂ ಕುಡಿದು
ಅಮಲೇರುವಷ್ಟು ಇಲ್ಲ. ನಿಮ್ಮಲ್ಲಿ ತೊಟ್ಟುಕೊಳ್ಳಲು ಸ್ವಲ್ಪ
ಬಟ್ಟೆಯಿದ್ದರೂ ನಿಮ್ಮನ್ನು ಬೆಚ್ಚಗಿಟ್ಟುಕೊಳ್ಳುವಷ್ಟು ಇಲ್ಲ.
ನೀವು ಸ್ವಲ್ಪ ಹಣ ಸಂಪಾದನೆ ಮಾಡಿದರೂ ಅದು ಹೇಗೆ
ಖರ್ಚಾಗುತ್ತದೋ ನಿಮಗೆ ತಿಳಿಯುವುದಿಲ್ಲ. ನಿಮ್ಮ
ಜೇಬಿಗೆ ತೂತು ಇದೆಯೋ ಎಂಬಂತೆ ಅದು
ಖರ್ಚಾಗುತ್ತದೆ.’’’
7ಸರ್ವಶಕ್ತನಾದ ಯೆಹೋವನು ಹೇಳುವದೇನಂದರೆ,
‘‘ನೀನು ಮಾಡುತ್ತಿರುವುದನ್ನು ಯೋಚಿಸು! 8ಬೆಟ್ಟಗಳ
ಮೇಲಕ್ಕೆ ಹೋಗಿ ಮರವನ್ನು ತಂದು ನನಗೆ ಆಲಯವನ್ನು
ಕಟ್ಟು, ಆಗ ನಾನು ನನ್ನ ನಿವಾಸದಲ್ಲಿ ಸಂತೋಷಿಸುವೆನು.
ಆಗ ನಾನು ಗೌರವಿಸಲ್ಪಡುವೆನು.’’ ಯೆಹೋವನು ಈ
ಸಂಗತಿಗಳನ್ನು ಹೇಳಿದ್ದಾನೆ.
9ಸರ್ವಶಕ್ತನಾದ ಯೆಹೋವನು ಹೇಳುವದೇನೆಂದರೆ,
‘‘ನೀವು ದೊಡ್ಡ ಸುಗ್ಗಿಯನ್ನು ಎದುರು ನೋಡುತ್ತಿದ್ದೀರಿ.
ಆದರೆ ನೀವು ಪೈರು ಕೊಯ್ಯಲು ಹೋಗುವಾಗ ಸ್ವಲ್ಪವೇ
ಕಾಳು ಇರುವುದು. ಅದನ್ನು ನೀವು ಮನೆಗೆ ತಂದಾಗ
ನಾನು ಗಾಳಿಯನ್ನು ಕಳುಹಿಸಿ ಅವುಗಳನ್ನು ಹಾರಿಸಿ ಬಿಡು
ವೆನು. ಹೀಗೆಲ್ಲಾ ಯಾಕೆ ಆಗುತ್ತಿದೆ? ಯಾಕೆಂದರೆ, ನನ್ನ
ಆಲಯವೂ ಇನ್ನೂ ಹಾಳುಬಿದ್ದಿದ್ದರೂ ನೀವೆಲ್ಲರೂ
ನಿಮ್ಮ ನಿಮ್ಮ ಮನೆಗಳನ್ನು ನೋಡಿಕೊಳ್ಳುವುದಕ್ಕಾಗಿ ಓಡಿ
ಹೋಗುತ್ತೀರಿ.
10ಅದಕ್ಕಾಗಿಯೇ ಆಕಾಶವು ಮಂಜನ್ನು ಸುರಿಸುವು
ದಿಲ್ಲ. ಭೂಮಿಯು ಪೈರನ್ನು ಬೆಳೆಸುವದಿಲ್ಲ.’’
11ಯೆಹೋವನು ಹೇಳುವದೇನೆಂದರೆ, ‘‘ನಾನು
ಭೂಮಿಗೂ ಪರ್ವತಗಳಿಗೂ ಒಣಗಿಹೋಗಲು ಆಜ್ಞಾಪಿ
ಸಿದ್ದೇನೆ. ಬೆಳೆ, ಹೊಸ ದ್ರಾಕ್ಷಾರಸ, ಆಲೀವ್ ಎಣ್ಣೆ ಮತ್ತು
ಭೂಮಿಯು ಫಲಿಸುವ ಯಾವ ವಸ್ತುವಾಗಲೀ ನಾಶ
ವಾಗುವದು. ಮತ್ತು ಎಲ್ಲಾ ಮನುಷ್ಯರೂ ಬಲಹೀನ
ರಾಗುವರು; ಪ್ರಾಣಿಗಳೂ ಬಲಹೀನವಾಗುವವು.’’

### ಹೊಸ ಆಲಯದ ಕಾರ್ಯಾಚರಣೆ

12ಶೆಯಲ್ತೀಯೇಲನ ಮಗನಾದ ಜೆರುಬ್ಬಾಬೆಲನಿಗೂ
ಯೆಹೋಚಾದಾಕನ ಮಗನೂ ಪ್ರಧಾನಯಾಜಕನೂ
ಆದ ಯೆಹೋಶುವನಿಗೂ ಸಂದೇಶವನ್ನು ಕೊಡಲು
ದೇವರಾದ ಯೆಹೋವನು ಹಗ್ಗಾಯನನ್ನು ಕಳುಹಿಸಿ
ದನು. ಆದ್ದರಿಂದ ಇವರು ಮತ್ತು ಎಲ್ಲಾ ಜನರು ತಮ್ಮ
ದೇವರಾದ ಯೆಹೋವನ ಸ್ವರವನ್ನು ಮತ್ತು ಪ್ರವಾದಿ
ಯಾದ ಹಗ್ಗಾಯನ ಮಾತುಗಳನ್ನು ಕೇಳಿದರು ಮತ್ತು
ತಮ್ಮ ದೇವರಾದ ಯೆಹೋವನಲ್ಲಿ ಭಯಭಕ್ತಿಯುಳ್ಳವ
ರಾದರು.

[13]ದೇವರು ತನ್ನ ಈ ಸಂದೇಶವನ್ನು ಜನರಿಗೆ ತಲುಪಿಸು
ವಂತೆ ಹಗ್ಗಾಯನನ್ನು ಉಪಯೋಗಿಸಿದನು. ಯೆಹೋ
ವನು ಇಂತೆನ್ನುತ್ತಾನೆ, ‘‘ನಾನು ನಿಮ್ಮೊಂದಿಗಿದ್ದೇನೆ.’’

[14]ಬಳಿಕ ದೇವರಾದ ಯೆಹೋವನು ಆಲಯವನ್ನು
ಕಟ್ಟುವಂತೆ ಜನರನ್ನು ಪ್ರೇರೇಪಿಸಿದನು. ಶೆಯಲ್ತೀಯೇ
ಲನ ಮಗನಾದ ಜೆರುಬ್ಬಾಬೆಲನು ಯೆಹೂದ ಪ್ರಾಂತ್ಯದ
ರಾಜ್ಯಪಾಲನಾಗಿದ್ದನು. ಯೆಹೋವನು ಅವನನ್ನು
ಪ್ರೇರೇಪಿಸಿದನು. ಯೆಹೋಚಾದಾಕನ ಮಗನಾದ
ಯೆಹೋಶುವನು ಪ್ರಧಾನ ಯಾಜಕನಾಗಿದ್ದನು.
ಯೆಹೋವನು ಅವನನ್ನು ಪ್ರೇರೇಪಿಸಿದನು ಅಲ್ಲದೆ
ಯೆಹೋವನು ಆಲಯವನ್ನು ಕಟ್ಟಲು ಎಲ್ಲಾ ಜನರನ್ನು
ಪ್ರೋತ್ಸಾಹಿಸಿದನು. ಆದುದರಿಂದ ಅವರೆಲ್ಲರೂ ತಮ್ಮ
ದೇವರಾದ ಯೆಹೋವನಿಗೆ ಆಲಯವನ್ನು ಕಟ್ಟಲು
ಪ್ರಾರಂಭಿಸಿದರು. [15]ಪರ್ಶಿಯಾದ ರಾಜನಾದ ದಾರ್ಯಾ
ವೇಷನ ಆಳ್ವಿಕೆಯ ಎರಡನೇ ವರ್ಷದ ಆರನೇ ತಿಂಗಳಿನ
ಇಪ್ಪತ್ನಾಲ್ಕನೆಯ ದಿವಸದಲ್ಲಿ ಕಟ್ಟುವ ಕಾರ್ಯವನ್ನು
ಪ್ರಾರಂಭಿಸಿದರು.

### ಯೆಹೋವನು ಜನರನ್ನು ಉತ್ತೇಜಿಸಿದನು

2 ಏಳನೇ ತಿಂಗಳಿನ ಇಪ್ಪತ್ತೊಂದನೆಯ ದಿವಸದಲ್ಲಿ
ಹಗ್ಗಾಯನಿಗೆ ಯೆಹೋವನಿಂದ ಈ ಸಂದೇಶವು
ದೊರಕಿತು: [2]‘‘ಶೆಯಲ್ತೀಯೇಲನ ಮಗನೂ ರಾಜ್ಯ
ಪಾಲನೂ ಆಗಿರುವ ಜೆರುಬ್ಬಾಬೆಲನಿಗೂ ಮಹಾಯಾಜ
ಕನೂ ಯೆಹೋಚಾದಾಕನ ಮಗನೂ ಆಗಿರುವ
ಯೆಹೋಶುವನಿಗೂ ಮತ್ತು ಎಲ್ಲಾ ಜನರಿಗೂ ಈ
ವಿಷಯಗಳನ್ನು ತಿಳಿಸು. [3]‘‘ನಿಮ್ಮಲ್ಲಿ ಎಷ್ಟು ಮಂದಿ ಹೊಸ
ಆಲಯವನ್ನು ನೋಡುವಾಗ ಕೆಡವಲ್ಪಟ್ಟ ಮೊದಲನೇ
ಆಲಯದ ಸೌಂದರ್ಯವನ್ನೂ ಗಾಂಭೀರ್ಯವನ್ನೂ
ನೆನಪು ಮಾಡುತ್ತೀರಿ? ನಿಮ್ಮ ಆಲೋಚನೆಯೇನು?
ಮೊದಲಿನ ಆಲಯದೊಡನೆ ಈ ಆಲಯವನ್ನು ಹೋಲಿಸಿ
ದಾಗ ಇದು ಏನೂ ಅಲ್ಲವೆಂದು ತೋರುತ್ತದೋ?
[4]ಆದರೆ ಜೆರುಬ್ಬಾಬೆಲನೇ, ಯೆಹೋವನು ಇಂತೆನ್ನು
ತ್ತಾನೆ, ನಿರುತ್ಸಾಹಗೊಳ್ಳಬೇಡ! ಮಹಾಯಾಜಕನಾದ
ಯೆಹೋಶುವನೇ, ನಿರುತ್ಸಾಹಗೊಳ್ಳಬೇಡ! ಈ ದೇಶದ
ಎಲ್ಲಾ ಜನರೇ, ನಿರುತ್ಸಾಹಗೊಳ್ಳಬೇಡಿ, ಕೆಲಸವನ್ನು
ಮುಂದುವರಿಸಿರಿ, ಯಾಕೆಂದರೆ ನಾನೇ ನಿಮ್ಮೊಂದಿಗಿ
ದ್ದೇನೆ’’’ ಎಂದು ಯೆಹೋವನು ಹೇಳುತ್ತಾನೆ. ಇದು
ಸರ್ವಶಕ್ತನಾದ ಯೆಹೋವನ ನುಡಿ.

[5]ಯೆಹೋವನು ಹೇಳುವದೇನೆಂದರೆ, ‘‘ನೀವು
ಈಜಿಪ್ಟ್ ದೇಶವನ್ನು ಬಿಟ್ಟಾಗ ನಾನು ನಿಮ್ಮೊಂದಿಗೆ
ಒಡಂಬಡಿಕೆಯನ್ನು ಮಾಡಿಕೊಂಡೆನು. ನಾನು ಆ
ವಾಗ್ದಾನವನ್ನು ನೆರವೇರಿಸಿದ್ದೇನೆ! ನನ್ನ ಆತ್ಮವು ನಿಮ್ಮೊಂದಿ
ಗಿದೆ. ಆದುದರಿಂದ ಭಯಪಡಬೇಡಿ! [6]ಸರ್ವಶಕ್ತನಾದ
ಯೆಹೋವನು ಇಂತೆನ್ನುತ್ತಾನೆ: ಹೇಳುತ್ತಿದ್ದಾನೆ. ಇನ್ನು
ಸ್ವಲ್ಪ ಸಮಯದಲ್ಲಿ ನಾನು ಭೂಪರಲೋಕಗಳನ್ನು
ಅದುರಿಸುವೆನು. ಸಮುದ್ರವನ್ನೂ ಒಣನೆಲವನ್ನೂ ಕಂಪಿ
ಸುವೆನು. [7]ನಾನು ಜನಾಂಗಗಳನ್ನು ನಡುಗಿಸುವೆನು. ಆಗ
ಅವರು ಎಲ್ಲಾ ಜನಾಂಗಗಳ ಐಶ್ವರ್ಯದೊಡನೆ ನಿಮ್ಮ
ಲ್ಲಿಗೆ ಬರುವರು. ಆಗ ನನ್ನ ಈ ಆಲಯವನ್ನು ಮಹಿಮೆ
ಯಿಂದ ತುಂಬಿಸುವೆನು. ಸರ್ವಶಕ್ತನಾದ ದೇವರು
ಇದನ್ನು ಹೇಳುತ್ತಿದ್ದಾನೆ! [8]ಅವರ ಬೆಳ್ಳಿಯೆಲ್ಲವೂ ನನ್ನದೇ,
ಅವರ ಬಂಗಾರವೂ ನನ್ನದೇ. ಇದು ಸರ್ವಶಕ್ತನಾದ
ಯೆಹೋವನ ನುಡಿ. [9]ಈ ಅಂತಿಮ ದೇವಾಲಯವು
ಮೊದಲನೆ ಆಲಯಕ್ಕಿಂತಲೂ ಸುಂದರವಾಗಿರುವುದು!
ನಾನು ಈ ಸ್ಥಳಕ್ಕೆ ಸಮಾಧಾನವನ್ನು ತರುವೆನು! ಜ್ಞಾಪಕ
ದಲ್ಲಿಡಿ, ಇವುಗಳನ್ನು ಸರ್ವಶಕ್ತನಾದ ಯೆಹೋವನು
ಹೇಳುತ್ತಿದ್ದಾನೆ!’’

### ಕೆಲಸವು ಪ್ರಾರಂಭವಾಯಿತು; ಆಶೀರ್ವಾದವು ಬರುವುದು

[10]ಪರ್ಶಿಯ ದೇಶದ ರಾಜನಾದ ದಾರ್ಯಾವೇಷನ
ಆಳ್ವಿಕೆಯ ಎರಡನೇ ವರ್ಷದ ಒಂಭತ್ತನೆಯ ತಿಂಗಳಿನ
ಇಪ್ಪತ್ನಾಲ್ಕನೆಯ ದಿವಸದಂದು ಯೆಹೋವನ ಸಂದೇಶವು
ಪ್ರವಾದಿಯಾದ ಹಗ್ಗಾಯನಿಗೆ ಬಂದಿತು. [11]ಈ ವಿಷ
ಯದ ಬಗ್ಗೆ ಧರ್ಮಶಾಸ್ತ್ರವು ಏನು ಹೇಳುತ್ತದೆ ಎಂಬು
ದನ್ನು ತಿಳಿದುಕೊಳ್ಳಲು ಯಾಜಕರನ್ನು ವಿಚಾರಿಸು ಎಂಬು
ದಾಗಿ ಸರ್ವಶಕ್ತನಾದ ಯೆಹೋವನು ನಿನಗೆ ಆಜ್ಞಾಪಿಸು
ತ್ತಾನೆ._[12]‘‘ಒಬ್ಬನು ತನ್ನ ಬಟ್ಟೆಯ ಸೆರಗಿನಲ್ಲಿ ಮಾಂಸ
ವನ್ನು ಒಯ್ಯುತ್ತಿದ್ದಾನೆಂದು ನೆನಸಿರಿ. ಆ ಮಾಂಸವು
ಯಜ್ಞದ ಒಂದು ಭಾಗವಾಗಿದೆ. ಆದುದರಿಂದ ಅದು
ಪವಿತ್ರವಾದದಲ್ಲ. ಆ ಬಟ್ಟೆಯು ರೊಟ್ಟಿಯನ್ನಾಗಲೀ,
ಅಡಿಗೆ ಮಾಡಿದ ಆಹಾರವಾಗಲೀ, ದ್ರಾಕ್ಷಾರಸವ
ನ್ನಾಗಲೀ, ಎಣ್ಣೆಯನ್ನಾಗಲೀ, ಮುಟ್ಟಿದರೆ ಮುಟ್ಟಿದ ವಸ್ತು
ಪವಿತ್ರ ವಸ್ತುವಾಗಬಹುದೇ?’’ ಯಾಜಕರು ಉತ್ತರವಾಗಿ
‘ಇಲ್ಲ’ ಎಂದರು.

[13]ಆಗ ಹಗ್ಗಾಯನು, ‘‘ಒಬ್ಬ ಮನುಷ್ಯನು ಸತ್ತ ಹೆಣ
ವನ್ನು ಮುಟ್ಟಿದರೆ, ಅವನು ಅಪವಿತ್ರನಾಗುವನು. ಆ ಸ್ಥಿತಿ
ಯಲ್ಲಿ ಅವನು ಮುಟ್ಟಿದ ಯಾವ ವಸ್ತುವೇ ಆಗಲಿ
ಅಪವಿತ್ರ ವಾಗುವದು.’’

ಆಗ ಯಾಜಕರು, ‘‘ಹೌದು, ಆ ವಸ್ತುಗಳೂ ಅಪವಿತ್ರ
ವಾಗುವವು’’ ಎಂದು ಉದ್ಗರಿಸಿದರು.

[14]ಆಗ ಹಗ್ಗಾಯನು, ‘‘ನಿಮ್ಮ ದೇವರಾದ ಯೆಹೋ
ವನು ಇಂತೆನ್ನುತ್ತಾನೆ: ‘ಈ ಜನಾಂಗದ ಜನರ ವಿಷಯ
ದಲ್ಲಿಯೂ ಅದು ಸತ್ಯವಾಗಿದೆ. ಅವರು ನನ್ನ ಮುಂದೆ

ಪವಿತ್ರರಲ್ಲ. ಆದುದರಿಂದ ಅವರು ಯಾವ ವಸ್ತುವ
ನ್ನಾದರೂ ಮುಟ್ಟಿದರೆ ಅದು ಅಶುದ್ಧವಾಗುವುದು ಮತ್ತು
ಅವರು ಯಜ್ಞವೇದಿಕೆಯ ಮೇಲೆ ಅರ್ಪಿಸುವುದೆಲ್ಲಾ
ಅಶುದ್ಧವಾಗಿರುವುದು. [15]ಈ ಹೊತ್ತಿಗಿಂತ ಮುಂಚೆ ನಡೆದ
ಸಂಗತಿಗಳನ್ನು ಜ್ಞಾಪಕಕ್ಕೆ ತಂದುಕೊಳ್ಳಿರಿ. ನೀವು
ದೇವಾಲಯವನ್ನು ಕಟ್ಟಲು ಆರಂಭಿಸಿದ ಹಿಂದಿನ ದಿವಸ
ಗಳನ್ನು ನೆನಪಿಗೆ ತಂದುಕೊಳ್ಳಿರಿ. [16]ಜನರಿಗೆ ಇಪ್ಪತ್ತು
ಕಿಲೋ ಧಾನ್ಯ ಬೇಕಿದ್ದರೆ ರಾಶಿಯಲ್ಲಿ ಹತ್ತು ಕಿಲೋ
ಮಾತ್ರ ಇರುತ್ತಿತ್ತು. ಜನರು ದ್ರಾಕ್ಷಾರಸದ ಪೀಪಾಯಿ
ಯಿಂದ ಐವತ್ತು ಲೀಟರ್ ದ್ರಾಕ್ಷಾರಸ ತೆಗೆಯಲು
ಹೋದರೆ ಅಲ್ಲಿ ಇಪ್ಪತ್ತು ಲೀಟರ್ ಮಾತ್ರ ಇರುತ್ತಿತ್ತು.
[17]ಯಾಕೆ ಹೀಗಾಯಿತು? ಯಾಕೆಂದರೆ ನಾನು ನಿಮ್ಮನ್ನು
ಶಿಕ್ಷಿಸಿದೆನು. ನೀವು ನೆಟ್ಟ ಮರಗಳನ್ನು ನಾಶಮಾಡಲು
ನಾನು ರೋಗವನ್ನು ಕಳುಹಿಸಿದೆನು. ನಿಮ್ಮ ಕೈಕೆಲಸವನ್ನು
ಹಾಳು ಮಾಡಲು ನಾನು ಆಲಿಕಲ್ಲಿನ ಮಳೆಯನ್ನು ಕಳುಹಿ
ಸಿದೆನು. ನಾನು ಇಷ್ಟೆಲ್ಲಾ ಮಾಡಿದರೂ ನೀವು ಯಾರೂ
ನನ್ನ ಬಳಿಗೆ ಬರಲಿಲ್ಲ.' ಇದು ಯೆಹೋವನ ನುಡಿ.''
[18]ಯೆಹೋವನು ಹೀಗನ್ನುತ್ತಾನೆ, ''ಈ ಹೊತ್ತು
ಒಂಭತ್ತನೇ ತಿಂಗಳಿನ ಇಪ್ಪತ್ನಾಲ್ಕನೆಯ ದಿವಸವಾಗಿದೆ.
ಆಲಯದ ಶಂಕುಸ್ಥಾಪನೆ ಮಾಡಿ ಮುಗಿಸಿರುತ್ತೀರಿ. ಇನ್ನು
ಮುಂದಕ್ಕೆ ಏನು ನಡಿಯುತ್ತದೆಂದು ಗಮನಿಸಿರಿ.
[19]ಉಗ್ರಾಣದಲ್ಲಿ ಗೋಧಿಯ ಕಾಳು ಏನಾದರೂ ಉಳಿದಿ
ದೆಯೋ? ಇಲ್ಲ! ದ್ರಾಕ್ಷಿಬಳ್ಳಿಗಳನ್ನು, ಅಂಜೂರದ ಮರ
ಗಳನ್ನು, ದಾಳಿಂಬದ ಮರಗಳನ್ನು, ಆಲೀವ್ ಮರಗಳನ್ನು
ನೋಡಿರಿ. ಅವು ಹಣ್ಣುಗಳನ್ನು ಬಿಡುತ್ತವೋ? ಇಲ್ಲ.
ಆದರೆ ಈ ದಿನದಿಂದ ನಾನು ನಿಮ್ಮನ್ನು
ಆಶೀರ್ವದಿಸುತ್ತೇನೆ!''

[20]ಒಂಭತ್ತನೇ ತಿಂಗಳ ಇಪ್ಪತ್ನಾಲ್ಕನೆಯ ದಿವಸದಲ್ಲಿ
ಇನ್ನೊಂದು ಸಂದೇಶವು ಹಗ್ಗಾಯನಿಗೆ ಯೆಹೋವನಿಂದ
ಬಂದಿತು. ಇದೇ ಆ ಸಂದೇಶ. [21]''ಯೆಹೂದ ಪ್ರಾಂತ್ಯದ
ರಾಜ್ಯಪಾಲನಾದ ಜೆರುಬ್ಬಾಬೆಲನ ಬಳಿಗೆ ಹೋಗು.
ನಾನು ಭೂಮ್ಯಾಕಾಶಗಳನ್ನು ಅಲ್ಲಾಡಿಸುವೆನು'' ಎಂದು
ಅವನಿಗೆ ಹೇಳು. [22]ನಾನು ಅನೇಕ ಅರಸರನ್ನೂ ದೇಶ
ಗಳನ್ನೂ ಕೆಡವಿಹಾಕುವೆನು; ಆ ಅನ್ಯ ಜನರ ಬಲಿಷ್ಠ
ಸಾಮ್ರಾಜ್ಯಗಳನ್ನು ನಾಶಮಾಡುವೆನು. ಅವರ ರಥ
ಗಳನ್ನೂ ರಾಹುತರನ್ನೂ ನಾಶಮಾಡುವೆನು. ಅವರ
ಯುದ್ಧದ ಕುದುರೆಗಳನ್ನೂ ಸವಾರರನ್ನೂ ಸೋಲಿಸು
ವೆನು. ಆ ಸೈನ್ಯಗಳವರು ಈಗ ಸ್ನೇಹಿತರಾಗಿದ್ದರೂ ಒಬ್ಬರಿ
ಗೊಬ್ಬರು ವೈರಿಗಳಾಗಿ ಒಬ್ಬರನ್ನೊಬ್ಬರು ಖಡ್ಗಗಳಿಂದ
ಕೊಲ್ಲುವರು.

[23]ಸರ್ವಶಕ್ತನಾದ ಯೆಹೋವನು ಇಂತೆನ್ನುತ್ತಾನೆ:
''ಶೆಯಲ್ತೀಯೇಲನ ಮಗನಾದ ಜೆರುಬ್ಬಾಬೆಲನೇ,
ನೀನು ನನ್ನ ಸೇವಕ. ನಿನ್ನನ್ನು ನಾನು ಆರಿಸಿಕೊಂಡಿದ್ದೇನೆ.
ಆ ಸಮಯದಲ್ಲಿ ನಾನು ನಿನ್ನನ್ನು ಒಂದು ಮುದ್ರೆ
ಯುಂಗುರವನ್ನಾಗಿ ಮಾಡುವೆನು. ನಾನು ಇವೆಲ್ಲವನ್ನು
ಮಾಡಿದೆನೆಂಬುದಕ್ಕೆ ನೀನು ಸಾಕ್ಷಿಯಾಗಿರುವಿ.''

ಸರ್ವಶಕ್ತನಾದ ಯೆಹೋವನು ಇವೆಲ್ಲವನ್ನು
ನುಡಿದಿದ್ದಾನೆ.

# License Agreement for Bible Texts

***World Bible Translation Center***
***Last Updated: September 21, 2006***

Copyright © 2006 by World Bible Translation Center
All rights reserved.

**These Scriptures:**
- Are copyrighted by World Bible Translation Center.
- Are not public domain.
- May not be altered or modified in any form.
- May not be sold or offered for sale in any form.
- May not be used for commercial purposes (including, but not limited to, use in advertising or Web banners used for the purpose of selling online add space).
- May be distributed without modification in electronic form for non-commercial use. However, they may not be hosted on any kind of server (including a Web or ftp server) without written permission. A copy of this license (without modification) must also be included.
- May be quoted for any purpose, up to 1,000 verses, without written permission. However, the extent of quotation must not comprise a complete book nor should it amount to more than 50% of the work in which it is quoted. A copyright notice must appear on the title or copyright page using this pattern: "Taken from the HOLY BIBLE: EASY-TO-READ VERSION™ © 2006 by World Bible Translation Center, Inc. and used by permission." If the text quoted is from one of WBTC's non-English versions, the printed title of the actual text quoted will be substituted for "HOLY BIBLE: EASY-TO-READ VERSION™." The copyright notice must appear in English or be translated into another language. When quotations from WBTC's text are used in non-saleable media, such as church bulletins, orders of service, posters, transparencies or similar media, a complete copyright notice is not required, but the initials of the version (such as "ERV" for the Easy-to-Read Version™ in English) must appear at the end of each quotation.

Any use of these Scriptures other than those listed above is prohibited. For additional rights and permission for usage, such as the use of WBTC's text on a Web site, or for clarification of any of the above, please contact World Bible Translation Center in writing or by email at distribution@wbtc.com.

World Bible Translation Center
P.O. Box 820648
Fort Worth, Texas 76182, USA
Telephone: 1-817-595-1664
Toll-Free in US: 1-888-54-BIBLE
E-mail: info@wbtc.com

**WBTC's web site –** World Bible Translation Center's web site: http://www.wbtc.org

**Order online –** To order a copy of our texts online, go to: http://www.wbtc.org

**Current license agreement –** *This license is subject to change without notice. The current license can be found at:* http://www.wbtc.org/downloads/biblelicense.htm

**Trouble viewing this file –** If the text in this document does not display correctly, use Adobe Acrobat Reader 5.0 or higher. Download Adobe Acrobat Reader from:
http://www.adobe.com/products/acrobat/readstep2.html

**Viewing Chinese or Korean PDFs –** To view the Chinese or Korean PDFs, it may be necessary to download the Chinese Simplified or Korean font pack from Adobe. Download the font packs from:
http://www.adobe.com/products/acrobat/acrrasianfontpack.html